# ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:-** ಶಿವಮೊಗ್ಗ ಕೃಷಿ ಮತ್ತು ತೋಟಗಾರಿಕಾ ವಿಶ್ವವಿದ್ಯಾಲಯಕ್ಕೆ 2014-15ನೇ ಸಾಲಿನಲ್ಲಿ ಪರಿಷ್ಕೃತ ಆಯವ್ಯಯದಂತೆ 1ನೇ ತ್ರೈಮಾಸಿಕ, ಯೋಜನೇತರ ಅನುದಾನವನ್ನು ಬಿಡುಗಡೆ ಮಾಡುವ ಬಗ್ಗೆ.

**ಓದಲಾಗಿದೆ:-** ಹಣಕಾಸು ನಿಯಂತ್ರಣಾಧಿಕಾರಿಗಳು, ಕೃಷಿ ಮತ್ತು ತೋಟಗಾರಿಕೆ ವಿಶ್ವವಿದ್ಯಾಲಯ, ಶಿವಮೊಗ್ಗ ಇವರ ದಿನಾಂಕ: 10-04-2014ರ ಪತ್ರ ಸಂಖ್ಯೆ: ಹನಿಅ/ಕೃತೋವಿವಿಶಿ /29/2014-15.

*** *** ****

**ಪ್ರಸ್ತಾವನೆ:-**

2014-15ನೇ ಸಾಲಿನ ಆಯವ್ಯಯದಲ್ಲಿ ಕೃಷಿ ಮತ್ತು ತೋಟಗಾರಿಕೆ ವಿಶ್ವವಿದ್ಯಾಲಯ, ಶಿವಮೊಗ್ಗಕ್ಕೆ ಯಾವುದೇ ಯೋಜನೇತರ ಅನುದಾನವಾಗಿ ರೂ.3233.00 ಲಕ್ಷಗಳನ್ನು ಸಹಾಯಾನುದಾನ-ವೇತನಗಳ ಉದ್ದೇಶಕ್ಕಾಗಿ ಲೆಕ್ಕ ಶೀರ್ಷಿಕೆ 2415-80-277-05-01-101ರಲ್ಲಿ ಹಂಚಿಕೆ ಮಾಡಿ ನಿಗಧಿಪಡಿಸಿದೆ. ಮೇಲೆ ಓದಲಾದ ದಿನಾಂಕ: 10-04-2014ರ ಪತ್ರದಲ್ಲಿ ಶಿವಮೊಗ್ಗ ಕೃಷಿ ಮತ್ತು ತೋಟಗಾರಿಕೆ ವಿಶ್ವವಿದ್ಯಾಲಯವು 2013-14ನೇ ಸಾಲಿನ ಯೋಜನೇತರ ಉದ್ದೇಶಗಳಿಗಾಗಿ ಬಿಡುಗಡೆಯಾದ ಅನುದಾನಕ್ಕೆ ಬಳಕೆ ಪ್ರಮಾಣ ಪತ್ರವನ್ನು ಲಗತ್ತಿಸುತ್ತಾ 2014-15ನೇ ಸಾಲಿನ ಯೋಜನೇತರ ಅನುದಾನವಾಗಿ ರೂ. 3233.00ಲಕ್ಷಗಳಲ್ಲಿ ರೂ 808.25 ಲಕ್ಷಗಳನ್ನು ಬಿಡುಗಡೆ ಮಾಡುವಂತೆ ಹಣಕಾಸು ನಿಯಂತ್ರಣಾಧಿಕಾರಿಗಳು, ಕೃಷಿ ಮತ್ತು ತೋಟಗಾರಿಕೆ ವಿಶ್ವವಿದ್ಯಾಲಯ, ಶಿವಮೊಗ್ಗ ಇವರು ಕೋರಿರುತ್ತಾರೆ.

ಪ್ರಸ್ತಾವನೆಯನ್ನು ಸರ್ಕಾರದ ಮಟ್ಟದಲ್ಲಿ ಪರಿಶೀಲಿಸಿ ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ: ಕೃಇ 10 ಕೃವಿಶಿ 2014, ಬೆಂಗಳೂರು, ದಿನಾಂಕ:14-05-2014**

ಕೃಷಿ ಮತ್ತು ತೋಟಗಾರಿಕೆ ವಿಶ್ವವಿದ್ಯಾಲಯ, ಶಿವಮೊಗ್ಗಕ್ಕೆ 2014-15ನೇ ಸಾಲಿನ ಆಯವ್ಯಯದಲ್ಲಿ ನಿಗದಿಯಾಗಿರುವ ಯೋಜನೇತರ ಅನುದಾನ ರೂ. 3233.00 ಲಕ್ಷಗಳಲ್ಲಿ ಮೊದಲನೇ ತ್ರೈಮಾಸಿಕ ಅನುದಾನವಾಗಿ ರೂ.808.25 ಲಕ್ಷಗಳನ್ನು (ಎಂಟು ನೂರ ಎಂಟು ಲಕ್ಷದ ಇಪ್ಪತ್ತೈದು ಸಾವಿರ ರೂಪಾಯಿಗಳು ಮಾತ್ರ) ಲೆಕ್ಕ ಶೀರ್ಷಿಕೆ-2415-80-277-05-01-101ರಡಿ ವೇತನ ಮತ್ತು ಇತರ ಭತ್ಯೆಗಳನ್ನು ಭರಿಸಲು ಈ ಕೆಳಕಂಡ ಷರತ್ತುಗಳಿಗೊಳಪಟ್ಟು ಬಿಡುಗಡೆ ಮಾಡಲಾಗಿದೆ.

- ಪ್ರತಿ ತ್ರೈಮಾಸಿಕ ಅನುದಾನವನ್ನು ಆಯಾ ತ್ರೈಮಾಸಿಕದ ಬಳಕೆ ಪ್ರಮಾಣ ಪತ್ರವನ್ನು ಒದಗಿಸಿ ಬಿಲ್ಲಿಗೆ ಮೇಲು ರುಜು ಪಡೆಯತಕ್ಕದ್ದು.
- ಸರ್ಕಾರವು ಯಾವ ಉದ್ದೇಶಕ್ಕಾಗಿ ಅನುದಾನ ಬಿಡುಗಡೆ ಮಾಡುವುದೋ ಅದೇ ಉದ್ದೇಶಕ್ಕಾಗಿ ಅನುದಾನವನ್ನು ಉಪಯೋಗಿಸತಕ್ಕದ್ದು.

* ಸರ್ಕಾರವು ನೀಡಿದ ಸೂಚನೆ ಆದೇಶಗಳನುಸಾರ ಕೃಷಿ ವಿಶ್ವವಿದ್ಯಾಲಯದವರು ವೆಚ್ಚದಲ್ಲಿ ಕಟ್ಟುನಿಟ್ಟಾಗಿ ಮಿತವ್ಯಯವನ್ನು ಪಾಲಿಸತಕ್ಕದ್ದು.
* ಬಿಡುಗಡೆಯಾಗಿರುವ ಅನುದಾನದ ಬಗ್ಗೆ ಸೂಕ್ತ ಸಮಯದಲ್ಲಿ ಮಹಾಲೇಖಪಾಲರ ಲೆಕ್ಕಗಳೊಂದಿಗೆ ಹೊಂದಾಣಿಕೆ ಮಾಡಿಕೊಳ್ಳತಕ್ಕದ್ದು.
* ಬಿಡುಗಡೆ ಮಾಡಲಾಗಿರುವ ಅನುದಾನವು ಆರ್ಥಿಕ ಪರಿಸ್ಥಿತಿಯನ್ನು ಅನುಸರಿಸಿ ಆರ್ಥಿಕ ಇಲಾಖೆಯು ನೀಡಬಹುದಾದ ಸೂಚನೆಗಳಿಗೆ ಒಳಪಟ್ಟಿರುತ್ತದೆ.
* ಆಯಾ ತಿಂಗಳಿಗೆ ಪ್ರತ್ಯೇಕ ಬಿಲ್ಲನ್ನು ಒದಗಿಸುವುದು.
*

2. ಬಿಡುಗಡೆಯಾಗಿರುವ ಅನುದಾನಕ್ಕೆ ಹಣಕಾಸು ನಿಯಂತ್ರಣಾಧಿಕಾರಿಗಳು, ಕೃಷಿ ಮತ್ತು ತೋಟಗಾರಿಕೆ ವಿಶ್ವವಿದ್ಯಾಲಯ, ಶಿವಮೊಗ್ಗ, ಇವರು ಸಲ್ಲಿಸುವ ಬಿಲ್ಲಿಗೆ ಮೇಲು ರುಜು ಮಾಡುವ ಅಧಿಕಾರವನ್ನು ಜಂಟಿ ಕೃಷಿ ನಿರ್ದೇಶಕರು, ಕೃಷಿ ಇಲಾಖೆ, ಶಿವಮೊಗ್ಗ, ಇವರಿಗೆ ನೀಡಲಾಗಿದೆ.

3. ಆರ್ಥಿಕ ಇಲಾಖೆಯ ಆದೇಶ ಸಂಖ್ಯೆ: ಎಫ್‌ಡಿ 3 ಟಿಎಫ್‌ಪಿ 2014, ದಿ:04-04-2014ರಲ್ಲಿ ಆಡಳಿತಾತ್ಮಕ ಇಲಾಖಾ ಕಾರ್ಯದರ್ಶಿಗಳಿಗೆ ಪ್ರತ್ಯಾಯೋಜಿಸಲಾದ ಆರ್ಥಿಕ ಅಧಿಕಾರ ಮತ್ತು ಇಲಾಖೆಯ ಆಂತರಿಕ ಆರ್ಥಿಕ ಸಲಹೆಗಾರರ ದಿನಾಂಕ: 08-05-2014ರ ಟಿಪ್ಪಣಿ ಸಂಖ್ಯೆ: ಕೃಇ 87 ಆಂಆಸ 2014ರಲ್ಲಿ ನೀಡಿರುವ ಸಹಮತಿಯ ಮೇರೆಗೆ ಈ ಆದೇಶವನ್ನು ಹೊರಡಿಸಲಾಗಿದೆ.

ಹೊರಡಿಸಿದೆ
ದಿನಾಂಕ: 15/5/14

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ

(ಮಂಜುನಾಥ ಪಾಟೀಲ್)
ಸರ್ಕಾರದ ಅಧೀನ ಕಾರ್ಯದರ್ಶಿ
ಕೃಷಿ ಇಲಾಖೆ(ಸೇವೆಗಳು)

ಪ್ರತಿ:-

1. ಮಹಾಲೇಖಪಾಲರು, ಕರ್ನಾಟಕ, (ಲೆಕ್ಕಪತ್ರ/ತನಿಖೆ) ಬೆಂಗಳೂರು.
2. ಕುಲಪತಿಗಳು, ಕೃಷಿ ಮತ್ತು ತೋಟಗಾರಿಕೆ ವಿಶ್ವವಿದ್ಯಾಲಯ, ಶಿವಮೊಗ್ಗ.
3. ಕೃಷಿ ಆಯುಕ್ತರು, ಕೃಷಿ ಇಲಾಖೆ, ಶೇಷಾದ್ರಿ ರಸ್ತೆ, ಬೆಂಗಳೂರು.
4. ಜಂಟಿ ಕೃಷಿ ನಿರ್ದೇಶಕರು, ಕೃಷಿ ಇಲಾಖೆ, ಶಿವಮೊಗ್ಗ.
5. ಉಪ ನಿರ್ದೇಶಕರು, ನೆಟ್‌ವರ್ಕ್ ಮೇನೇಜ್‌ಮೆಂಟ್ ಸೆಂಟರ್, ಖನಿಜ ಭವನ, ಬೆಂಗಳೂರು.
6. ಜಿಲ್ಲಾ ಖಜಾನಾಧಿಕಾರಿಗಳು, ಶಿವಮೊಗ್ಗ ಜಿಲ್ಲೆ, ಶಿವಮೊಗ್ಗ.
7. ಹಣಕಾಸು ನಿಯಂತ್ರಣಾಧಿಕಾರಿಗಳು, ಕೃಷಿ ಮತ್ತು ತೋಟಗಾರಿಕೆ ವಿಶ್ವವಿದ್ಯಾಲಯ, ಶಿವಮೊಗ್ಗ.
8. ಆಂತರಿಕ ಆರ್ಥಿಕ ಸಲಹೆಗಾರರು, ಕೃಷಿ ಮತ್ತು ತೋಟಗಾರಿಕೆ ಇಲಾಖೆ, ಬೆಂಗಳೂರು.
9. ಸರ್ಕಾರದ ಅಧೀನ ಕಾರ್ಯದರ್ಶಿ, ಆರ್ಥಿಕ ಇಲಾಖೆ (ವೆಚ್ಚ-4 & 5), ವಿಧಾನ ಸೌಧ, ಬೆಂಗಳೂರು.
10. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿಗಳು.

Recd (4) copies 14/5/14